ಕಾರಂಜಾ ನೀರಾವರಿ ಯೋಜನೆಯಿಂದ ಹೊಸ ಏತ ನೀರಾವರಿ ಯೋಜನೆಯನ್ನು ಪ್ರಾರಂಭಿಸುವುದು.

2408(3128) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರ್) :— ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಾರಂಜಾ ನೀರಾವರಿ ಯೋಜನೆಯ ಮೂಲಕವಾಗಿ ಎಷ್ಟು ಏತ ನೀರಾವರಿ ಯೋಜನೆಗಳು ಕಾರ್ಯಗತವಾಗಿದೆ;

ಆ) ಹುಲಸೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಳ್ಳಿಖೇಡ ಗ್ರಾಮದ ಮಾರ್ಗವಾಗಿ ಡಾಕುಳಗಿ ಹಿಲಾಲಪುರ ಗ್ರಾಮಗಳಲ್ಲಿ ನೀರಾವರಿ ಸೌಲಭ್ಯಗಳ ಕೊರತೆ ಇರುವುದರಿಂದ ಈ ಭಾಗದ ರೈತರ ಸಾವಿರಾರು ಎಕರೆ ಪ್ರದೇಶಕ್ಕೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಹೊಸದಾಗಿ ಏತ ನೀರಾವರಿ ಯೋಜನೆಯನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರ ಪರಿಶೀಲನೆ ನಡೆಸುವುದೇ?

ಇ) ಹಾಗಿಲ್ಲದಿದ್ದಲ್ಲಿ ಇದಕ್ಕೆ ಕಾರಣಗಳೇನು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು) :—

ಅ) ಕಾರಂಜಾ ನೀರಾವರಿ ಯೋಜನೆಯಲ್ಲಿ (ಬಲದಂಡೆಯಲ್ಲಿ) ಒಂದು ಮುಂದಂಡೆ ಏತ ನೀರಾವರಿ ಯೋಜನೆ ಕಾರ್ಯಗತವಾಗುತ್ತಿದೆ.

ಆ) ಪರಿಶೀಲಿಸಲಾಗುತ್ತಿದೆ.

ಇ) ಈಗಾಗಲೇ ಸದರಿ ಯೋಜನೆಯ ಕಾರ್ಯ ಸಾಧ್ಯತೆ ಬಗ್ಗೆ ಪರಿಶೀಲಿಸುತ್ತಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಿಂದ ಹೊರಬಿದ್ದ ಬೂದಿಯಿಂದ ಕೃಷ್ಣ ನದಿ ನೀರು ಕಲುಷಿತಗೊಂಡಿರುವುದು.

2410(2761) ಶ್ರೀ ರಾಜುಗೌಡ ಜಿ. (ಹನ್ನೂರು) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶಕ್ತಿನಗರ ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಿಂದ ಹೊರಬಿದ್ದ ಬೂದಿಯಿಂದ ಕೃಷ್ಣ ನದಿ ನೀರು ಕಲುಷಿತಗೊಂಡಿದೆಯೇ?

ಆ) ಈ ಜಲಮಾಲಿನ್ಯವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?